ಆ) ಮಾಚೇನಹಳ್ಳಿ ಕೈಗಾರಿಕಾ ವಸಾಹತು ಪ್ರದೇಶಕ್ಕೆ ಒಂದು ಎಂ.ಜಿ.ಡಿ. ನೀರು ಸರಬರಾಜು ಮಾಡುವ ಯೋಜನೆ ಅನುಮೋದನೆಯಾಗಿದೆ. ಈ ಯೋಜನೆಗೆ ಮೆ: ಮೆಕಾನ್ ಸಂಸ್ಥೆಯು ಕೇಂದ್ರ ಸರ್ಕಾರದ ಉದ್ದಿಮೆ ಕಾಮಗಾರಿಯ ಟ್ರಾಪ್ಟ್ ಟೆಂಡರ್ ಡಕ್ಯುಮೆಂಟ್‌ಗಳನ್ನು ಸಲ್ಲಿಸಿದ್ದಾರೆ. ಸದರಿ ಕಾಮಗಾರಿಗೆ ಸಧ್ಯದಲ್ಲೇ ಟೆಂಡರ್ ಕರೆಯಲಾಗುವುದು.

ಇ) ಶಿವಮೊಗ್ಗ ತಾಲ್ಲೂಕು ಮಾಚೇನಹಳ್ಳಿ ಕೈಗಾರಿಕಾ ವಸಾಹತು ಪ್ರದೇಶದಲ್ಲಿ 71 ನಿವೇಶನಗಳನ್ನು ಹಂಚಲಾಗಿದೆ. ಸದರಿ ಕೈಗಾರಿಕಾ ಪ್ರದೇಶದಲ್ಲಿ ಹಾಲಿ 61 ಕೈಗಾರಿಕೆಗಳು ನಡೆಯುತ್ತಿದ್ದು. ಹಾಲಿ ಕೈಗಾರಿಕಾ ಪ್ರದೇಶದಲ್ಲಿ 10 ಕೈಗಾರಿಕೆಗಳು ಸ್ಥಗಿತಗೊಂಡಿದ್ದು. ಸದರಿ ಕೈಗಾರಿಕೆಗಳ ಹೆಸರುಗಳನ್ನು ಅನುಬಂಧ–2ರಲ್ಲಿ ಸೂಚಿಸಲಾಗಿದೆ.

**ಶಿವಮೊಗ್ಗ ವಿಧಾನ ಸಭಾ ಕ್ಷೇತ್ರದಲ್ಲಿ ನೂತನ ಪಶುವೈದ್ಯ ಶಾಲೆ ಪ್ರಾರಂಭ**

3069 (3476) : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನಗರ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿರುವ ಪಶುಗಳ ಸಮೀಕ್ಷೆ ನಡೆಸಲಾಗಿದೆಯೇ ಹಾಗೂ ಇವುಗಳ ಸಂಖ್ಯೆಗೆ ಅನುಗುಣವಾಗಿ ಪಶು ಚಿಕಿತ್ಸಾಲಯ ಕೇಂದ್ರಗಳ ಅನುಕೂಲ ಕಲ್ಪಿಸಲಾಗಿದೆಯೇ; ಶಿವಮೊಗ್ಗ ನಗರದ ವಿದ್ಯಾನಗರದಲ್ಲಿ ಹೊಸ ಪಶುಚಿಕಿತ್ಸಾ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) 2001 ರಿಂದ 2003 ರವರೆಗೆ ಸರ್ಕಾರದ ವತಿಯಿಂದ ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪಶುಚಿಕಿತ್ಸಾ ಕೇಂದ್ರಕ್ಕೆ ಆಸ್ಪತ್ರೆಗಳಿಗೆ ಬಿಡುಗಡೆಗೊಳಿಸಲಾದ ಔಷಧಿಗಳ ಅನುದಾನದ ಮೊತ್ತವೆಷ್ಟು?

ಶ್ರೀ ಎಂ. ಮಹಾದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) 1997 ರಲ್ಲಿ ಜಾನುವಾರುಗಳ ಸಮೀಕ್ಷೆ ನಡೆಸಲಾಗಿದೆ.

ಸೂಕ್ತ ಸೌಕರ್ಯಗಳನ್ನು ಒದಗಿಸಲಾಗಿದೆ.

ವಿದ್ಯಾನಗರದಲ್ಲಿ ಮಾಸ ಪಶು ಚಿಕಿತ್ಸಾ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆ ಇಲ್ಲ.

ಆ) **ಔಷಧಿ ಖರೀದಿಗಾಗಿ ವೆಚ್ಚ ಮಾಡಿರುವ ವಿವರ ಕೆಳಕಂಡಂತಿದೆ**

| ವರ್ಷ | ಮೊತ್ತ (ರೂ. ಲಕ್ಷಗಳಲ್ಲಿ) |
|---|---|
| 2000–01 | 3.38 |
| 2001–02 | 3.38 |
| 2002–03 | 4.13 |

**ಶಿವಮೊಗ್ಗ ತಾಲ್ಲೂಕಿನ ಕೆರೆಗಳಲ್ಲಿ ಮೀನು ಮರಿ ಉತ್ಪಾದನೆ**

3070 (3477) : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ತಾಲ್ಲೂಕಿನಲ್ಲಿ ಎಷ್ಟು ಕೆರೆಗಳಲ್ಲಿ ಮೀನುಮರಿ ಬಿಡಲಾಗಿದೆ;

ಆ) ಇವುಗಳಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು?

ಶ್ರೀ ವಸಂತ ವಿ. ಸಾಲಿಯಾನ್ (ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು):

ಅ) ಶಿವಮೊಗ್ಗ ತಾಲ್ಲೂಕಿನಲ್ಲಿ 2002–2003ನೇ ಸಾಲಿನಲ್ಲಿ 221 ಕೆರೆಗಳಲ್ಲಿ ಮೀನುಮರಿಗಳನ್ನು ಬಿಡಲಾಗಿದೆ.

ಆ) 2002–03ನೇ ಸಾಲಿನಲ್ಲಿ ಮೀನುಮರಿಗಳ ಮಾರಾಟದಿಂದ ರೂ. 90,000ಗಳ ಆದಾಯ ಬಂದಿರುತ್ತದೆ.

**ಶಿವಮೊಗ್ಗ ತಾಲ್ಲೂಕಿನಲ್ಲಿ ಅಕ್ರಮ ಗಣಿಗಾರಿಕೆ**

3071 (3478) : ಶ್ರೀ ಹೆಚ್.ಎಂ. ಚಂದ್ರಶೇಖರಪ್ಪ (ಶಿವಮೊಗ್ಗ) : ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ತಾಲ್ಲೂಕಿನಲ್ಲಿ ಕಲ್ಲು ಗಣಿಗಾರಿಕೆ ಅಕ್ರಮವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಗಣಿಗಾರಿಕೆ ಪರವಾನಿಗೆಯನ್ನು ಎಷ್ಟು ಜನರಿಗೆ ನೀಡಲಾಗಿದೆ?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು):

ಅ) ಬಂದಿದೆ.

ಶಿವಮೊಗ್ಗ ತಾಲ್ಲೂಕಿನಲ್ಲಿ ಸೂಳೆಬೈಲು, ಮತ್ತೂರು, ಸೋಗಾನ, ಬಸವನ ಗಂಗೂರು, ಗಜ್ಜೇನಹಳ್ಳಿ, ಕಲ್ಲೂರು, ಗಾಜನೂರು ಗ್ರಾಮಗಳಲ್ಲಿನ ಸರಹದ್ದಿನಲ್ಲಿ ಗಣಿಗಾರಿಕೆಯ 40 ಜನರಿಗೆ ಪರವಾನಿಗೆಗಳನ್ನು ನೀಡಲಾಗಿದೆ.

**ಶಿವಮೊಗ್ಗ ತಾಲ್ಲೂಕಿನಲ್ಲಿ ರೇಷ್ಮೆ ಕೃಷಿ**

3072 (3479) : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ (ಶಿವಮೊಗ್ಗ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ವಿಧಾನಸಭೆ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಎಕರೆ ಹಿಪ್ಪುನೇರಳೆ ಕೃಷಿಯನ್ನು ಮಾಡಲಾಗಿದೆ; ಇಲ್ಲಿರುವ ಸಿಬ್ಬಂದಿ ವಿವರಗಳನ್ನು ತಿಳಿಸಲಾಗುವುದೇ?

ಆ) ಈ ಕೃಷಿಯಿಂದ ಸರ್ಕಾರದ ಬೊಕ್ಕಸಕ್ಕೆ ಬರುವ ಆದಾಯವೆಷ್ಟು?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು):

ಅ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 59.25 ಹೆಕ್ಟೇರ್ ಪ್ರದೇಶದಲ್ಲಿ ಹಿಪ್ಪುನೇರಳೆ ಕೃಷಿಯನ್ನು ಮಾಡಲಾಗುತ್ತಿದ್ದು, ಒಂದು ತಾಂತ್ರಿಕ ಸೇವಾ ಕೇಂದ್ರವಿರುತ್ತದೆ. ಇದರಲ್ಲಿ ಎರಡು ರೇಷ್ಮೆ ನಿರೀಕ್ಷಕರು, 8 ರೇಷ್ಮೆ ಪ್ರದರ್ಶಕರು ಹಾಗೂ 1 ವಾಹನ ಚಾಲಕರು ಕಾರ್ಯನಿರ್ವಹಿಸುತ್ತಿದ್ದಾರೆ.

ಆ) ರೂ. 8973–00

**ರಾಜ್ಯದಲ್ಲಿ ಎಸ್.ಇ.ಪಿ ಸಾಲ**

3073 (3456) : ಶ್ರೀ ಸಿ. ಚನ್ನಿಗಪ್ಪ (ಕೊರಟಗೆರೆ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?